# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 70 | Pages. 2 | Date: 13-02-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 70 – ಪುಟಗಳು : 2 | 13-02-2026 | ಶುಕ್ರವಾರ | Ph: 8762954248 | ದರ : ₹1


# ಕೇಂದ್ರದ ವಿರುದ್ಧ ಜಿಲ್ಲಾದ್ಯಂತ ಪ್ರತಿಭಟನೆ ಯಶಸ್ವಿ

## ವಿಬಿ-ಜಿ-ರಾಮ್-ಜಿಗೆ ವಿರೋಧ | ಕಾರ್ಮಿಕ ಸಂಹಿತೆ ವಾಪಸ್‌ಗೆ ಹೆಚ್ಚಿದ ಒತ್ತಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಸರ್ಕಾರದ ನಾಲ್ಕು ಕಾರ್ಮಿಕ ಸಂಹಿತೆ ವಿರೋಧಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ (ಜೆಸಿಟಿಯು), ಸಂಯುಕ್ತ ಹೋರಾಟ ಕರ್ನಾಟಕ (ಎಸ್‌ಹೆಚ್‌ಕೆ) ಹಾಗೂ ಜಿಲ್ಲಾ ಜನಪರ ಚಳವಳಿಗಳ ಒಕ್ಕೂಟದಿಂದ ನಗರ ಸೇರಿ ಜಿಲ್ಲಾದ್ಯಂತ ಬೃಹತ್ ಪ್ರತಿಭಟನೆ ನಡೆಸಲಾಯಿತು. ಹಾಸನದ ಪ್ರಧಾನ ಅಂಚೆ ಕಚೇರಿ ಎದುರು ಬಹಿರಂಗ ಸಮಾವೇಶ ನಡೆಸಿ ರಸ್ತೆ ತಡೆ ನಡೆಸಲಾಯಿತು. ಉಳಿದಂತೆ ತಾಲ್ಲೂಕು ಕೇಂದ್ರಗಳಲ್ಲಿ ಮೆರವಣಿಗೆಗಳು ನಡೆದವು.



ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಬಿಗಿ ಭದ್ರತೆ ಒದಗಿಸಲಾಗಿತ್ತು. ರಸ್ತೆ ತಡೆಯಿಂದ ವಾಹನ ಸಂಚಾರದಲ್ಲಿ ಕೆಲ ಹೊತ್ತು ವ್ಯತ್ಯಯವಾಯಿತು. ತಾಲ್ಲೂಕು ಕೇಂದ್ರಗಳಲ್ಲೂ ಪ್ರತಿಭಟನೆಗಳು ನಡೆದವು. ನಗರದ ಹೇಮಾವತಿ ಪ್ರತಿಮೆಯಿಂದ ಮೆರವಣಿಗೆಯಲ್ಲಿ ಬಂದ ನೂರಾರು ಪ್ರತಿಭಟನಾಕಾರರು ಪ್ರಧಾನ ಅಂಚೆ ಕಚೇರಿ ಎದುರು ಬಹಿರಂಗ ಸಮಾವೇಶದ ಬಳಿಕ ಜಿಲ್ಲಾಧಿಕಾರಿ ಕಚೇರಿಗೆ ಮನವಿ ಸಲ್ಲಿಸಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಮಾತನಾಡಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಹಕ್ಕುಗಳನ್ನು ದುರ್ಬಲಗೊಳಿಸುತ್ತಿವೆ. 29 ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿ 4 ಸಂಹಿತೆಗಳನ್ನು ಜಾರಿಗೊಳಿಸಿರುವುದು ಕಾರ್ಮಿಕರ ಮೇಲೆ ಆರ್ಥಿಕ ಹಾಗೂ ರಾಜಕೀಯ ದಾಳಿ ನಡೆಸಲಾಗಿದೆ. ಸಂಘ ರಚನೆ ಹಕ್ಕಿಗೆ ನಿರ್ಬಂಧ, ಸ್ಥಾಯಿ ಆದೇಶಗಳ ವ್ಯಾಪ್ತಿ ಕಡಿತ ಹಾಗು ನಿಗದಿತ ಅವಧಿಯ ಉದ್ಯೋಗ ಪದ್ಧತಿ ಜಾರಿಯಿಂದ ಉದ್ಯೋಗ ಭದ್ರತೆಗೆ ಧಕ್ಕೆಯಾಗಿದೆ ಎಂದರು.

ಕಾರ್ಖಾನೆಗಳ ವ್ಯಾಖ್ಯಾನದಲ್ಲಿ ಕಾರ್ಮಿಕರ ಮಿತಿ ಹೆಚ್ಚಳ ಹಾಗು ಗುತ್ತಿಗೆ ಕಾರ್ಮಿಕರ ಲೈಸೆನ್ಸ್ ಮಿತಿ ಹೆಚ್ಚಳದಿಂದ ಬಹುತೇಕ ಕಾರ್ಮಿಕರು ಇಎಸ್‌ಐ, ಪಿಎಫ್, ಗ್ರಾಚ್ಯುಟಿ, ಬೋನಸ್ ಸೇರಿ ಕಾನೂನುಬದ್ಧ ಸೌಲಭ್ಯಗಳಿಂದ ಹೊರಗುಳಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಮಾನ ಕೆಲಸಕ್ಕೆ ಸಮಾನ ವೇತನ ಎಂಬ ತತ್ವವನ್ನು ಜಾರಿಗೆ ತರುವ ಬದಲು ತಳಹಂತದ ಕೂಲಿ ನಿಗದಿ




ಮಾಡಿರುವುದು ವೇತನ ಹೆಚ್ಚಳದ ಮೇಲೆ ದುಷ್ಪರಿಣಾಮ ಬೀರುತ್ತದೆ. ವಿದ್ಯುಚ್ಛಕ್ತಿ ತಿದ್ದುಪಡಿ, ಭೂಸ್ವಾಧೀನ ಕಾಯ್ದೆ ತಿದ್ದುಪಡಿ, ಬೀಜ ಮಸೂದೆ ಸೇರಿ ಜನವಿರೋಧಿ ನೀತಿಗಳನ್ನು ಹಿಂಪಡೆಯಬೇಕು. ರಾಜ್ಯ ಸರ್ಕಾರವೂ ಕಾರ್ಮಿಕ ಸಂಹಿತೆಗಳಿಗೆ ನಿಯಮಾವಳಿ ರಚನೆ ಕೈಬಿಡಬೇಕೆಂದು ಒತ್ತಾಯಿಸಿದರು.

ಕಾರ್ಮಿಕರ ವೇತನದ ಪಾಲು ಇಳಿಕೆಯಾಗುತ್ತಿರುವುದು, ಕೆಲಸದ ಹಕ್ಕಿನ ಮೇಲೆ ದಾಳಿ, ಸಾರ್ವಜನಿಕ ವಲಯಗಳ ಖಾಸಗೀಕರಣ ಹಾಗೂ ಬೆಲೆ ಏರಿಕೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಸರ್ಕಾರಗಳು ಬಂಡವಾಳಗಾರರ ಪರ ನೀತಿಗಳನ್ನು ಮುಂದುವರಿಸುತ್ತಿರುವುದು ಸಾಮಾಜಿಕ ಅಸಮಾನತೆ ಹೆಚ್ಚಿಸುತ್ತಿದೆ ಎಂದು ಆರೋಪಿಸಿದರು.

ಮುಷ್ಕರದಲ್ಲಿ ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ. ಪುಷ್ಪ, ಎಐಟಿಯುಸಿ ಜಿಲ್ಲಾಧ್ಯಕ್ಷ ಎಂ.ಸಿ. ಡೋಂಗ್ರೆ, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಹೆಚ್.ಆರ್. ನವೀನ್ ಕುಮಾರ್, ರೈತ ಮುಖಂಡ ಬಾಬು, ಬ್ಯಾಂಕ್ ನೌಕರರ ಸಂಘದ ಪರಮಶಿವಯ್ಯ, ಆರ್. ಕುಮಾರ್, ದಲಿತ ಮುಖಂಡರಾದ ರಾಜಶೇಖರ್, ಈರೇಶ್, ವಿಮಾ ನೌಕರರ ಸಂಘದ ವಿಶ್ವನಾಥ್, ರವಿಕುಮಾರ್, ಸಂವಿಧಾನ ಓದು ಅಭಿಯಾನದ ರಾಜು ಗೊರೂರು, ಅರವಿಂದ್, ಎಸ್‌ಎಫ್‌ಐ ಜಿಲ್ಲಾ ಕಾರ್ಯದರ್ಶಿ ರಮೇಶ್ ಹಾಗೂ ಇತರರಿದ್ದರು.

### ಚನ್ನರಾಯಪಟ್ಟಣದಲ್ಲಿ ಮೆರವಣಿಗೆ

ಪಟ್ಟಣದ ಆಸ್ಪತ್ರೆ ವೃತ್ತದಲ್ಲಿ ಕಾರ್ಮಿಕರ ಸಂಘಟನೆಯ ಪದಾಧಿಕಾರಿಗಳು ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಅದಕ್ಕೂ ಮೊದಲು ತಾಲೂಕು ಕಚೇರಿ ಮುಂಭಾಗ ನಡೆದ ಬಹಿರಂಗ ಸಭೆಯಲ್ಲಿ ಮಾತನಾಡಿದ ಸಿಐಟಿಯು ಜಿಲ್ಲಾ ಮುಖಂಡ ಎಚ್.ಎಸ್.ಮಂಜುನಾಥ್ ಅವರು, ಕಳೆದ 12 ವರ್ಷಗಳಿಂದ ಕೇಂದ್ರ ಸರ್ಕಾರವು ಪ್ರಜಾಪ್ರಭುತ್ವದ ಎಲ್ಲಾ ಹಕ್ಕುಗಳನ್ನು ದಮನ ಮಾಡುತ್ತಿದೆ ಎಂದು ಆರೋಪಿಸಿದರು.

ಬಂಡವಾಳಶಾಹಿಗಳಿಗೆ ಪರವಾದ ಮತ್ತು ಕಾರ್ಮಿಕರಿಗೆ ಮಾರಕವಾದ ನೀತಿಗಳನ್ನು ಕೇಂದ್ರ ಸರ್ಕಾರ ಅನುಸರಿಸುತ್ತದೆ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಕಾರ್ಮಿಕ ಸಂಹಿತೆಗಳು ಯುವಜನತೆ ಮತ್ತು ಶ್ರಮಿಕ ವರ್ಗವನ್ನು ಆಧುನಿಕ ಗುಲಾಮಗಿರಿಗೆ ತಳ್ಳಲಿದೆ. 4 ಕಾರ್ಮಿಕ ಕೋಡ್‌ಗಳನ್ನು ಜಾರಿಗೊಳಿಸಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಹಾಕಿದರು.

ಕಾರ್ಮಿಕ ನೋಡ್‌ಗಳನ್ನು ಹಿಂಪಡೆದುಕೊಳ್ಳಬೇಕು, ರಾಜ್ಯ ಸರ್ಕಾರ 4 ಕಾರ್ಮಿಕ ಕೋಡ್‌ಗಳಿಗೆ ನಿಯಮಗಳನ್ನು ರೂಪಿಸದೇ ಜಾರಿ ಮಾಡಬಾರದು ಎಂದು ಆಗ್ರಹಿಸಿದರು.

ತಾಲೂಕು ಕಚೇರಿ ಮುಂಭಾಗದಿಂದ ಆರಂಭವಾದ ಪ್ರತಿಭಟನಾ ರ್‍ಯಾಲಿ, ನವೋದಯ ವೃತ್ತ, ಹೊಸ ಬಸ್ ನಿಲ್ದಾಣ ಮುಖಾಂತರ ಮೈಸೂರು ರಸ್ತೆಯಲ್ಲಿ ಚಲಿಸಿ ಆಸ್ಪತ್ರೆ ವೃತ್ತದಲ್ಲಿ ರಸ್ತೆ ತಡೆ ನಡೆಸಿ ರಾಜ್ಯ, ಕೇಂದ್ರ ಸರ್ಕಾರಗಳ ನೀತಿ ಖಂಡಿಸಿ ರಸ್ತೆ ತಡೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಅಂಗನವಾಡಿ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಜಯಲಕ್ಷ್ಮಿ, ಕಾರ್ಯದರ್ಶಿ ನಾಗರತ್ನ, ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ತೇಜಸ್ ಗೌಡ, ಕಾರ್ಯದರ್ಶಿ, ವಾಸು, ಪಂಚಾಯತ್ ನೌಕರರ ಸಂಘದ ಕಾರ್ಯದರ್ಶಿ ಚಂದ್ರೇಗೌಡ, ಸಹ ಕಾರ್ಯದರ್ಶಿ, ಲಕ್ಷ್ಮೇಗೌಡ, ದಲಿತ ಸಂಘಟನೆಗಳ ಮುಖಂಡರಾದ ಗೋವಿಂದರಾಜು, ಮಂಜಣ್ಣ ದಂಡೋರ, ಹರೀಶ ಮತ್ತಿತರರಿದ್ದರು.

## ಸಕಲೇಶಪುರದಲ್ಲೂ ಕಾರ್ಮಿಕ ಸಂಘಟನೆಗಳ ಪ್ರತಿಭಟನೆ

ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ (ಜೆಸಿಟಿಯು), ಸಂಯುಕ್ತ ಹೋರಾಟ ಕರ್ನಾಟಕ (ಎಸ್‌ಎಚ್‌ಕೆ) ಹಾಗೂ ಹಾಸನ ಜಿಲ್ಲಾ ಜನಪರ ಚಳವಳಿಗಳ ಒಕ್ಕೂಟದ ನೇತೃತ್ವದಲ್ಲಿ ಗುರುವಾರ ನಡೆದ ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಸಕಲೇಶಪುರದಲ್ಲಿ ಬೆಂಬಲ ವ್ಯಕ್ತವಾಯಿತು. ಹೇಮಾವತಿ ಪ್ರತಿಮೆ ಬಳಿಯಿಂದ ಹಳೆ ಬಸ್ ನಿಲ್ದಾಣದವರೆಗೆ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜನವಿರೋಧಿ ನೀತಿಗಳ ವಿರುದ್ಧ ಘೋಷಣೆ ಕೂಗಿದರು. ರಾಷ್ಟ್ರೀಯ ಹೆದ್ದಾರಿ ತಡೆದು, ಕೇಂದ್ರ ಸರ್ಕಾರದ ಅಧೀನದಲ್ಲಿರುವ ಅಂಚೆ ಇಲಾಖೆ ಕಚೇರಿಗೆ ಪಿಕೆಟಿಂಗ್ ಮಾಡಲಾಯಿತು.

ನರೇಗಾ ಸೇರಿದಂತೆ ಗ್ರಾಮೀಣ ಉದ್ಯೋಗ ಯೋಜನೆಗಳನ್ನು ದುರ್ಬಲಗೊಳಿಸಲಾಗುತ್ತಿದ್ದು, ವಿದ್ಯುತ್ ಖಾಸಗೀಕರಣದಿಂದ ರೈತರು ಹಾಗೂ ಜನಸಾಮಾನ್ಯರಿಗೆ ನಷ್ಟವಾಗುತ್ತಿದೆ. ರೈತರ ಬೆಳೆಗಳಿಗೆ ಬೆಂಬಲ ಬೆಲೆ ನೀಡದೇ ಕಂಪನಿ ಕೃಷಿಯನ್ನು ಉತ್ತೇಜಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿಐಟಿಯು ಸೌಮ್ಯ, ನೇತ್ರಾವತಿ, ಪ್ರೀತು, ಪ್ಲಾಂಟೇಶನ್ ಸಂಘಟನೆಯ ರಮೇಶ್, ಥಾಮಸ್, ಅಕ್ಷರ ದಾಸೋಹದ ಸುಮಿತ್ರ, ಸಾವಿತ್ರಿ, ಸೌಭಾಗ್ಯ, ಗ್ರಾಮ ಪಂಚಾಯಿತಿ ನೌಕರರ ಸಂಘದ ರಾಜು ಮತ್ತಿತರರಿದ್ದರು.

## ವಿವಿಧ ಬೇಡಿಕೆ ಈಡೇರಿಕೆಗಾಗಿ ಗುತ್ತಿಗೆ-ಹೊರಗುತ್ತಿಗೆ ನೌಕರರ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರದ ವಿವಿಧ ಇಲಾಖೆಯಡಿ ಗುತ್ತಿಗೆ-ಹೊರಗುತ್ತಿಗೆ ಆಧಾರದಡಿ ಕೆಲಸ ಮಾಡುತ್ತಿರುವವರಿಗೆ ವೇತನ ನೇರ ಪಾವತಿ ಜಾರಿಗಳಿಸುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗುರುವಾರ ರಾಜ್ಯ ಸರ್ಕಾರಿ ಖಾಯಂಮೇತರ ನೌಕರರ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಒಕ್ಕೂಟದ ರಾಜ್ಯ ಕಾರ್ಯದರ್ಶಿ ಕಾಂತರಾಜು ಮಾತನಾಡಿ, ಸರ್ಕಾರಿ ಇಲಾಖೆಗಳಲ್ಲಿ ದುಡಿಯುತ್ತಿರುವ ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರೂ ಸೇವಾ ಭದ್ರತೆ, ಸಮಾನ ವೇತನ ಮತ್ತು ಮೂಲ ಸೌಲಭ್ಯಗಳಿಂದ ವಂಚಿತರಾಗಿರುವುದು ಅನ್ಯಾಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಉದಾರೀಕರಣ ನೀತಿಗಳ ಪರಿಣಾಮವಾಗಿ ಖಾಯಂ ಹುದ್ದೆಗಳ ರದ್ದತಿ ಹಾಗೂ ನೇಮಕಾತಿ ಸ್ಥಗಿತದಿಂದ ಹೆಚ್ಚಿನ ಕೆಲಸಗಳನ್ನು ಖಾಯಂಮೇತರ ನೌಕರರ ಮೇಲೆ ಹಾಕಲಾಗಿದೆ. ಆದರೆ, ಕನಿಷ್ಠ ವೇತನ, ಇಎಸ್‌ಐ, ಪಿಎಫ್ ಸೇರಿ ಕಾನೂನುಬದ್ಧ ಸೌಲಭ್ಯಗಳು ದೊರೆಯುತ್ತಿಲ್ಲ. ಸಮಾನ ಕೆಲಸಕ್ಕೆ ಸಮಾನ ವೇತನ ಎಂಬ ಸುಪ್ರೀಂ ಕೋರ್ಟ್ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿ ಮಾಡಬೇಕೆಂದು ಆಗ್ರಹಿಸಿದರು.

ಖಾಯಂಮೇತರ ನೌಕರರನ್ನು ಅನುಭವದ ಆಧಾರದಲ್ಲಿ ಖಾಯಂ ಮಾಡಲು ಕೆಸಿಎಸ್‌ಆರ್ ನಿಯಮಾವಳಿಗಳಿಗೆ ತಿದ್ದುಪಡಿ ತರಬೇಕು. ಕನಿಷ್ಠ ವೇತನ ಕಾಯ್ದೆಯಡಿ ಬರುವ ಎಲ್ಲಾ ನೌಕರರಿಗೆ ಸರ್ಕಾರದ ಅಧಿಸೂಚನೆಯಂತೆ ವೇತನ ಜಾರಿ ಮಾಡಬೇಕು. ಹೊರಗುತ್ತಿಗೆ ನೇಮಕಾತಿ ಪದ್ಧತಿಯನ್ನು ರದ್ದುಪಡಿಸಿ ನೇರಪಾವತಿ ವ್ಯವಸ್ಥೆ ಜಾರಿಗೆ ತರಬೇಕೆಂದು ಒತ್ತಾಯಿಸಿದರು.

ವೇತನ ಪರಿಷ್ಕರಣೆ ವಿಷಯದಲ್ಲಿ ಕೆಲ ಶಾಖೆಗಳಿಗೆ ನೀಡಿರುವ ಮಾದರಿಯನ್ನು ಎಲ್ಲಾ ಇಲಾಖೆಗಳ ಖಾಯಂಮೇತರ ನೌಕರರಿಗೂ ಅನ್ವಯಿಸಬೇಕು. ಮಹಿಳಾ ನೌಕರರಿಗೆ ವೇತನ ಸಹಿತ ಹೆರಿಗೆ ಹಾಗೂ ಮುಟ್ಟಿನ ರಜೆ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ವಿಭಾಗದ ಕಾರ್ತಿಕ್, ಸಂದೇಶ್, ಸಮಾಜ ಕಲ್ಯಾಣ ಇಲಾಖೆಯ ಪ್ರಕಾಶ್, ಸಂತೋಷ್, ಆಶಾ, ಮಹೇಶ್, ರಮ್ಯ, ದರ್ಶನ್ ಮತ್ತಿತರರಿದ್ದರು.

## ಅನಿಕೇತನ ಶಾಲೆ ವಾರ್ಷಿಕೋತ್ಸವದಲ್ಲಿ ಸಾಧಕರಿಗೆ ಸನ್ಮಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪಟ್ಟಣದ ಡಿ.ಕಾಳೇನಹಳ್ಳಿ ಗೇಟ್ ಸಮೀಪದಲ್ಲಿರುವ ಅನಿಕೇತನ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಾರ್ಷಿಕೋತ್ಸವದಲ್ಲಿ ಸಾಧಕರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಹಿರಿಯ ಸಾಹಿತಿ ಎನ್. ಗೋವಿಂದೇಗೌಡ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಿಕ್ಷಣವು ಕೇವಲ ಪಾಠಪುಸ್ತಕಗಳಿಗೆ ಸೀಮಿತವಾಗಿರದೆ ಮಕ್ಕಳ ವ್ಯಕ್ತಿತ್ವ ನಿರ್ಮಾಣಕ್ಕೆ ದಾರಿಯಾಗಬೇಕು. ಪೋಷಕರು ತಮ್ಮ ಮಕ್ಕಳನ್ನು ಮೊಬೈಲ್ ವ್ಯಸನದಿಂದ ದೂರವಿಟ್ಟು ಓದು ಹಾಗೂ ಪಠ್ಯೇತರ ಚಟುವಟಿಕೆಗಳತ್ತ ಪ್ರೋತ್ಸಾಹಿಸಬೇಕು ಎಂದರು.

ಶಾಲೆಯ ಸಂಸ್ಥಾಪಕ



ಡಾ. ಚಂದ್ರು ಕಾಳೇನಹಳ್ಳಿ ಮಾತನಾಡಿ, ಮಕ್ಕಳಲ್ಲಿ ಜಾತಿ-ಧರ್ಮ ಭೇದವಿಲ್ಲದ ಸಮಾನ ಮನೋಭಾವ ಬೆಳೆಸುವ ಪ್ರಯತ್ನ ಶ್ಲಾಘನೀಯ ಸಂಗತಿ. ಕನಕದಾಸರ ಆದರ್ಶಗಳನ್ನು ಉದಾಹರಿಸಿ, ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಶ್ರೀಮಂತ-ಬಡವ ಎಂಬ ಭೇದವಿಲ್ಲದೆ ಪಾತ್ರ ನಿರ್ವಹಿಸುವುದು ಉತ್ತಮ ಸಮಾಜ ನಿರ್ಮಾಣಕ್ಕೆ ಪೂರಕವೆಂದು ಅಭಿಪ್ರಾಯಪಟ್ಟರು.

ಸನ್ಮಾನ ಸ್ವೀಕರಿಸಿದ ಬಯಲಾಟ ಕ್ಷೇತ್ರ ಸಾಧಕ ಆರ್.ಬಿ. ಪುಟ್ಟೇಗೌಡ ಮಾತನಾಡಿ, ಪೌರಾಣಿಕ ರಂಗಭೂಮಿಯ ಜೊತೆಗೆ ನಶಿಸಿ ಹೋಗುತ್ತಿರುವ ಮೂಡಲಪಾಯ ಬಯಲಾಟದ ಸಂರಕ್ಷಣೆ ಹಾಗೂ ಪುನರುಜ್ಜೀವನ ಅತ್ಯಂತ ಅಗತ್ಯ ಎಂದು ಹೇಳಿದರು. ಜನಪದ ಕಲೆಗಳನ್ನು ಉಳಿಸಲು ಸಮಾಜದ ಎಲ್ಲ ವರ್ಗಗಳ ಸಹಕಾರ ಅವಶ್ಯಕವಾಗಿದೆ ಎಂದು ತಿಳಿಸಿದರು.

ತಮ್ಮ ರಾಜ್ಯಮಟ್ಟದ ಗೌರವ ಪ್ರಶಸ್ತಿಗೆ ಪ್ರೇರಣೆಯಾಗಿದ್ದ ಡಾ. ಚಂದ್ರು ಕಾಳೇನಹಳ್ಳಿ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಪ್ರೊ. ಈ. ನಾಗಣ್ಣ ಅವರು ವಿದ್ಯಾರ್ಥಿಗಳಿಗೆ ಸಭೆ-ಸಮಾರಂಭಗಳಲ್ಲಿ ಶಿಸ್ತು, ಸಂಯಮ ಹಾಗು ಆತ್ಮವಿಶ್ವಾಸದ ಅರಿವು ಮೂಡಿಸಿದರು.

## ಹೈಕೋರ್ಟ್ ಸೂಚನೆಯಂತೆ ಎಂಟಿಇಎಸ್ ಅವಿಶ್ವಾಸ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹೈಕೋರ್ಟ್ ಸೂಚನೆ ಹಿನ್ನೆಲೆಯಲ್ಲಿ ನಗರದ ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಆಡಳಿತ ಮಂಡಳಿ ಅವಿಶ್ವಾಸ ನಿರ್ಣಯ ಮಂಡನಾ ಸಭೆ ಗುರುವಾರ ನಡೆಯಿತು.

ವೀಕ್ಷಕರಾಗಿ ಹಿರಿಯ ವಕೀಲ ಉಮಾಶಂಕರ್ ಆಗಮಿಸಿದ್ದರು. ಹೈಕೋರ್ಟ್ ನಿರ್ದೇಶನದಂತೆ 2/3 ಸಂಖ್ಯಾಬಲದ ಮಾನದಂಡದಂತೆ ನಡೆದ ಮತದಾನದಲ್ಲಿ

ಮಾಜಿ ಅಧ್ಯಕ್ಷ ಅಶೋಕ್ ಹಾರನಹಳ್ಳಿ ನೇತೃತ್ವದ ತಂಡಕ್ಕೆ 14 ಮತ ಲಭಿಸಿದರೆ, ಹಾಲಿ ಅಧ್ಯಕ್ಷ ಆರ್.ಟಿ. ದ್ಯಾವೇಗೌಡರ ತಂಡಕ್ಕೆ 10 ಮತಗಳು ಬಂದವು. ಆಡಳಿತ ಮಂಡಳಿಯಲ್ಲಿ ಒಟ್ಟು 24 ಮಂದಿ ನಿರ್ದೇಶಕರಿದ್ದು, 2/3 ಮೆಜಾರಿಟಿ ಪ್ರಕಾರ ಅವಿಶ್ವಾಸ ನಿರ್ಣಯ ಗೆಲ್ಲಲು 16 ನಿರ್ದೇಶಕರ ಬೆಂಬಲ ಅಗತ್ಯವಿದೆ. ಆದರೆ ಮತ್ತೊಂದು ಮೂಲಗಳ ಪ್ರಕಾರ ಸರಳ ಬಹುಮತ



ಸಾಕು ಎಂಬ ಅಭಿಪ್ರಾಯವೂ ಇದೆ. ಒಟ್ಟಿನಲ್ಲಿ ಹೈಕೋರ್ಟ್ ನೇಮಿಸಿದ್ದ ವೀಕ್ಷಕರ ಸಮ್ಮುಖದಲ್ಲಿ ಮತದಾನ ಪ್ರಕ್ರಿಯೆ ಸುಗಮವಾಗಿ ನಡೆದಿದ್ದು, ಉಮಾಶಂಕರ್ ಅವರು ಶುಕ್ರವಾರ ಹೈಕೋರ್ಟ್‌ಗೆ ವರದಿ ನೀಡುವ ಸಾಧ್ಯತೆ ಇದ್ದು, ಸೋಮವಾರ ವಿಚಾರಣೆಗೆ ಬರುವ ಸಾಧ್ಯತೆ ಇದೆ. ಅಂದೇ ಎಲ್ಲ ಗೊಂದಲಗಳಿಗೆ ತೆರೆ ಬೀಳುವ ಸಾಧ್ಯತೆ ಇದೆ.

ಅವಿಶ್ವಾಸ ನಿರ್ಣಯದ ಭವಿಷ್ಯ ಹೈ ಅಂಗಳಕ್ಕೆ ತಲುಪಿದ್ದು, ಎಲ್ಲರ ಚಿತ್ತ ತೀರ್ಪಿನತ್ತ ನೆಟ್ಟಿದೆ.

ಸಂಸ್ಥೆಯ ಹಾಲಿ ಪ್ರಧಾನ ಕಾರ್ಯದರ್ಶಿ ಜಗದೀಶ್ ಚೌಡುವಳ್ಳಿ ಮಾತನಾಡಿ, ನ್ಯಾಯಾಲಯದ ಆದೇಶದಂತೆ ಅವಿಶ್ವಾಸ ನಿರ್ಣಯ ಸಭೆ ನಡೆಯಿತು.

ನಮ್ಮ ವಿರುದ್ಧ 2/3 ಸಂಖ್ಯಾಬಲ ಸಾಬೀತುಪಡಿಸಲು ಎದುರು ಬಣಕ್ಕೆ ಸಾಧ್ಯವಾಗಿಲ್ಲ. ಸಂಸ್ಥೆಯಲ್ಲಿ ಒಟ್ಟು 24 ಮಂದಿ ನಿರ್ದೇಶಕರಿದ್ದು ನಮ್ಮ ವಿರುದ್ಧ ಅವಿಶ್ವಾಸ ಸಾಬೀತು ಪಡಿಸಲು ಅವರಿಗೆ 16 ನಿರ್ದೇಶಕರ ಬೆಂಬಲ ಬೇಕು.

ನಾವು ಅಧಿಕಾರ ಉಳಿಸಿಕೊಳ್ಳಲು 9 ನಿರ್ದೇಶಕರ ಬೆಂಬಲ ಬೇಕು. ಆದರೆ ನಡೆದ ಅವಿಶ್ವಾಸ ನಿರ್ಣಯದಲ್ಲಿ ಅವರ ಪರ 14 ಮತ್ತು ನಮ್ಮ ಪರ 10 ಮಂದಿ ನಿರ್ದೇಶಕರು ಸಂಖ್ಯಾಬಲ ಸಾಬೀತು ಮಾಡಿದ್ದೇವೆ.

ನಾವು ಅಧಿಕಾರ ಉಳಿಸಿಕೊಳ್ಳಲು ಅಗತ್ಯವಿರುವ ಬೆಂಬಲ ಪಡೆದಿದ್ದೇವೆ. ಹೈಕೋರ್ಟ್ ವೀಕ್ಷಕರು ಸಭೆಯ ಸಂಪೂರ್ಣ ವರದಿಯನ್ನು ಫೆಬ್ರವರಿ 16 ರಂದು ನ್ಯಾಯಾಲಯಕ್ಕೆ ಸಲ್ಲಿಸಲಿದ್ದಾರೆ. ಬಳಿಕ ವಾದ-ಪ್ರತಿವಾದ ಆಲಿಸಿ ನ್ಯಾಯಾಲಯ ತೀರ್ಪು ನೀಡಲಿದೆ. ನಮಗೆ ನ್ಯಾಯ ಸಿಗಲಿದೆ, ನಮ್ಮ ಬಣವೇ ಅಧಿಕಾರದಲ್ಲಿ ಮುಂದುವರೆಯುತ್ತೇವೆಂಬ ವಿಶ್ವಾಸವಿದೆ. ಒಂದು ವ್ಯತಿರಿಕ್ತ ತೀರ್ಪು ಬಂದರೆ ಸುಪ್ರೀಂ ಕೋರ್ಟ್ ಮೆಟ್ಟಿಲೇರುವುದಕ್ಕೂ ನಾವು ಸಿದ್ಧ ಎಂದರು.

## ಹಣಕಾಸು ವೈಷಮ್ಯ: ಪತ್ನಿ ಮೇಲೆ ಮಾರಣಾಂತಿಕ ಹಲ್ಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗಂಡನ ನಿರಂತರ ಸಾಲದಿಂದ ಬೇಸತ್ತ ಪತ್ನಿ ಅದನ್ನು ಪ್ರಶ್ನಿಸಿದ್ದಕ್ಕೆ ಪತಿ ಮರದ ಬ್ಯಾಟ್‌ನಿಂದ ತಲೆಗೆ ಬಲವಾಗಿ ಹೊಡೆದು ಕೊಲೆಗೆ ಯತ್ನಿಸಿದ್ದಾನೆ.

ಇಂದ್ರಾ ನಗರದದಲ್ಲಿ ವಾಸವಿರುವ ಪುಷ್ಪ ಎಂಬುವವರ ಮೇಲೆ ಪತಿ ದೊರೆಸ್ವಾಮಿ ಹಲ್ಲೆ ಮಾಡಿದ್ದಾನೆ ಎನ್ನಲಾಗಿದೆ. ನಿರ್ದಿಷ್ಟ ದುಡಿಮೆ ಹಾಗೂ ಕುಟುಂಬದ ಜವಾಬ್ದಾರಿ ಇಲ್ಲದ ದೊರೆಸ್ವಾಮಿ ವಿಪರೀತ ಸಾಲ ಮಾಡಿಕೊಂಡಿದ್ದನು. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ.

ಕುಟುಂಬ ನಿರ್ವಹಣೆಗಾಗಿ ಪುಷ್ಪ ಅವರು ಗಾರ್ಮೆಂಟ್ಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡಿಕೊಂಡಿದ್ದು, ದೊರೆಸ್ವಾಮಿಗೆ ಸತ್ಯಮಂಗಲ ಬಡಾವಣೆಯಲ್ಲಿ ಇಸ್ತ್ರಿ ಅಂಗಡಿ ಮಾಡಿಕೊಟ್ಟಿದ್ದಾರೆ.

ಆದರೆ, ದೊರೆಸ್ವಾಮಿಯ ಸಾಲದ ಹುಚ್ಚು ಕಡಿಮೆಯಾಗಿಲ್ಲ. ಹೆಂಡತಿಯ ಬ್ಯಾಂಕ್ ಚೆಕ್ ಕೊಟ್ಟು ಭಾಗ್ಯ ಲೋಕೇಶ್ ಎಂಬುವವರಿಂದ ಸಾಲ ಪಡೆದಿದ್ದ.


ಅವರು ಹಣ ಕೇಳಲು ಮನೆಗೆ ಬಂದಿದ್ದಕ್ಕೆ ಆಕ್ರೋಶಗೊಂಡ ಪುಷ್ಪಾ, ಇಸ್ತ್ರಿ ಅಂಗಡಿ ಬಳಿ ತೆರಳಿ ಗಂಡನೊಂದಿಗೆ ವಾಗ್ವಾದ ಶುರು ಮಾಡಿದ್ದಾರೆ. ಇಬ್ಬರ ನಡುವೆ ವಾಕ್ಸಮರ ಜೋರಾಗಿ ದೊರೆಸ್ವಾಮಿ ಅಲ್ಲಿಯೇ ಇದ್ದ ಮರದ ಬ್ಯಾಟ್‌ನಿಂದ ತಲೆಗೆ ಬಲವಾಗಿ ಹೊಡೆದಿದ್ದಾನೆ. ಗಂಭೀರ ಗಾಯಗೊಂಡಿರುವ ಪುಷ್ಪ ಅವರನ್ನು ಹಿಮ್ಸ್‌ಗೆ ದಾಖಲಿಸಲಾಗಿದೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರೀತಂ ಪಕ್ಷ ಬಿಡುತ್ತಾರೆಂದು ಗಿಳಿ ಶಾಸ್ತ್ರ ಕೇಳಿದ್ದೀರಾ: ಬಿಜೆಪಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಾಜಿ ಶಾಸಕ ಪ್ರೀತಂ ಜೆ. ಗೌಡ ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರುತ್ತಾರೆ ಎಂದು ಜೆಡಿಎಸ್‌ನವರು ಗಿಳಿ ಶಾಸ್ತ್ರ ಅಥವಾ ಜ್ಯೋತಿಷ್ಯ ಕೇಳಿದ್ದಾರಾ ಎಂದು ರೈತ ಮೋರ್ಚಾ ಜಿಲ್ಲಾಧ್ಯಕ್ಷ ನಾರಾಯಣಗೌಡ ವ್ಯಂಗ್ಯವಾಡಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಜಿಲ್ಲೆಯಲ್ಲಿ ಮತ್ತೊಬ್ಬ ಒಕ್ಕಲಿಗ ನಾಯಕ ಬೆಳೆಯುತ್ತಾರೆಂದು ಪ್ರೀತಂ ಗೌಡ ಅವರನ್ನು ಕಾಂಗ್ರೆಸ್‌ಗೆ ಕಳುಹಿಸಿಕೊಡಲು ಪ್ರಯತ್ನಿಸುತ್ತಿದ್ದಾರೆ. ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಜೆಡಿಎಸ್ ಜೊತೆಗೆ ಹೊಂದಾಣಿಕೆ




ಬೇಡವೆಂಬ ಕಾರ್ಯಕರ್ತರ ಅಭಿಪ್ರಾಯವನ್ನು ಪ್ರೀತಂ ಹೇಳಿದ್ದಾರೆ. ಅದನ್ನೇ ದೊಡ್ಡದಾಗಿ ಬಿಂಬಿಸುತ್ತಿರುವುದು ಏಕೆಂದು ಪ್ರಶ್ನಿಸಿದರು. ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಮೈತ್ರಿ ಕುರಿತು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರೇ ಅಪಸ್ವರ ಎತ್ತಿದ್ದಾರೆ. ಅವರ ಹೇಳಿಕೆಗೆ ವಿರೋಧ ವ್ಯಕ್ತಪಡಿಸದ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್, ಪ್ರೀತಂ ಮಾತಿಗೆ ಸಹನೆ ಕಳೆದುಕೊಳ್ಳುತ್ತಿರುವುದು ಏಕೆ ಎಂದು ಪ್ರಶ್ನಿಸಿದರು. ಪ್ರೀತಂ ಗೌಡ ಅವರು ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ಜೆಡಿಎಸ್‌ಗೆ ಎದುರಾಳಿಯಾಗಿ ಅವರು ಬೆಳೆಯುತ್ತಿದ್ದಾರೆಂದು ವ್ಯವಸ್ಥಿತ ಷಡ್ಯಂತ್ರ 'ನಡೆಯುತ್ತಿದೆ.

ಲೋಕಸಭೆ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿ ಸೋಲಿಗೆ ಪ್ರೀತಂ ಗೌಡ ಕಾರಣವೆಂದು ಆರೋಪಿಸುವುದು ಸರಿಯಲ್ಲ. ಮಾಜಿ ಶಾಸಕರಾಗಿ ಅವರು ತಮ್ಮ ಶಕ್ತಾನುಸಾರ ಮತ ಕೊಡಿಸಿದ್ದಾರೆ. ಆದರೆ ಜೆಡಿಎಸ್ ಶಾಸಕರೇ ಇರುವ ಹೊಳೆನರಸೀಪುರದಲ್ಲಿ ಕಾಂಗ್ರೆಸ್ 17 ಸಾವಿರ, ಹಾಸನದಲ್ಲಿ 20 ಸಾವಿರ ಹಾಗು ಅರಕಲಗೂಡು ಕ್ಷೇತ್ರದಲ್ಲಿ 19 ಸಾವಿರ ಅಧಿಕ ಮತ ಪಡೆಯಲು ಹೇಗೆ ಸಾಧ್ಯವಾಯಿತು. ಜೆಡಿಎಸ್ ಶಾಸಕರೇ ಪ್ರಜ್ವಲ್ ರೇವಣ್ಣ ಸೋಲಿಗೆ ಕಾರಣ ಎನ್ನಲು ಆಗುತ್ತದೆಯೇಂದು ಖಾರವಾಗಿ ಪ್ರಶ್ನಿಸಿದರು.

ಜಿಲ್ಲೆಯಲ್ಲಿ ಬಿಜೆಪಿ ಪ್ರಬಲವಾಗಿಲ್ಲ ಎಂದು ಅಪಪ್ರಚಾರ ಮಾಡಲಾಗುತ್ತಿದೆ. ಬೇಲೂರಿನಲ್ಲಿ ಕೆ.ಎಸ್.ಲಿಂಗೇಶ್ ವಿರುದ್ಧ ಗೆದ್ದಿರುವುದು ಬಿಜೆಪಿ ಅಭ್ಯರ್ಥಿ ಅಲ್ಲವೇ. ಜೆಡಿಎಸ್ ಜಿಲ್ಲಾಧ್ಯಕ್ಷರು ವಾಸ್ತವ ತಿಳಿದು ಮಾತನಾಡಬೇಕು. ಮೈತ್ರಿ ಪಕ್ಷದಿಂದ ತಮಗೆ ಟಿಕೆಟ್ ಸಿಗುತ್ತದೆಂಬ ಭ್ರಮೆಯಲ್ಲಿ ಲಿಂಗೇಶ್ ಇದ್ದಾರೆ. ಒಂದು ವೇಳೆ ಟಿಕೆಟ್ ಕೈ ತಪ್ಪಿದರೆ ಏನು ಮಾಡುತ್ತಾರೆಂಬುದು ಕುತೂಹಲ ಮೂಡಿಸಿದೆ ಎಂದರು.

ಬಿಜೆಪಿ ನಗರಾಧ್ಯಕ್ಷ ಯೋಗೇಶ್, ನಗರಸಭೆ ಮಾಜಿ ಅಧ್ಯಕ್ಷ ಮೋಹನ್, ಗ್ರಾಮಾಂತರ ಮಂಡಲ ಅಧ್ಯಕ್ಷ ಲಕ್ಷ್ಮೀಶ್, ಹುಡಾ ಮಾಜಿ ಅಧ್ಯಕ್ಷ ಲಲಾಟಮೂರ್ತಿ ಹಾಜರಿದ್ದರು.

# ಗುರಿ ತಲುಪದ ಮ್ಯಾಪಿಂಗ್ ಕಾರ್ಯ: ಬಿಎಲ್‌ಓಗಳಿಗೆ ನೋಟಿಸ್ ಬಿಸಿ

## ಹೇಳತೀರದ ಶಿಕ್ಷಕರ ಗೋಳು | ಪಠ್ಯ ಬೋಧನೆಗೆ ಸಮಯ ಸಿಗುತ್ತಿಲ್ಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಗಾಗಿ (ಎಸ್‌ಐಆರ್) ಜಿಲ್ಲಾದ್ಯಂತ ಮ್ಯಾಪಿಂಗ್ ಪ್ರಕ್ರಿಯೆ ನಡೆಯುತ್ತಿದ್ದು, ಕಾರ್ಯಕ್ಕೆ ನಿಯೋಜನೆಗೊಂಡಿರುವ ಶಾಲಾ ಶಿಕ್ಷಕರು (ಬಿಎಲ್‌ಒ)ಗಳು ಹೈರಾಣಾಗಿದ್ದಾರೆ.

2002ರ ಮತದಾರರ ಪಟ್ಟಿಯನ್ನು 2025ರ ಮತದಾರರ ಪಟ್ಟಿಗೆ ಜೋಡಣೆ ಮಾಡುವುದು, 2002ರ ಮತದಾರರ ಪಟ್ಟಿಯಲ್ಲಿ ಮತದಾರರ ಹೆಸರು ನೊಂದಣಿಯಾಗದಿದ್ದಲ್ಲಿ ಅವರ ತಂದೆ/ತಾಯಿ/ಅಜ್ಜ/ಅಜ್ಜಿಯರ ಭಾಗ ಸಂಖ್ಯೆ ಹಾಗು ಕ್ರಮ ಸಂಖ್ಯೆಯೊಂದಿಗೆ ಜೋಡಣೆ ಮಾಡಿಕೊಳ್ಳಬೇಕು. 2002ರ ಮತದಾರರಾಗಿದ್ದಲ್ಲಿ ವಾಸವಿದ್ದಂತಹ ವಿಧಾನಸಭಾ ಕ್ಷೇತ್ರದ ಹೆಸರು/ಸಂಖ್ಯೆ, ಭಾಗ ಸಂಖ್ಯೆ ಹಾಗೂ ಕ್ರಮ ಸಂಖ್ಯೆಯನ್ನು ತಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗಳಿಗೆ ಸಾರ್ವಜನಿಕರು ನೀಡಬೇಕು. ಆದರೆ, ಈ ಕಾರ್ಯ ಸುಲಲಿತವಾಗಿ ಆಗದೆ ಇರುವುದರಿಂದ ಶಿಕ್ಷಕರು ಅತ್ಯಧಿಕ ಹೊರೆ ಎದುರಿಸಬೇಕಾಗಿದೆ.

ಪ್ರಾಥಮಿಕ ಶಾಲಾ ಶಿಕ್ಷಕರು ಮಕ್ಕಳಿಗೆ ಪಠ್ಯ ಬೋಧನೆಗಿಂತ ಇನ್ನಿತರ ಚಟುವಟಿಕೆಯಲ್ಲೇ ಕಾಲ ಕಳೆಯುವಂತಾಗಿದೆ. ಪಾಠ ಮಾಡುವುದನ್ನು ಬಿಟ್ಟು 54 ಹೆಚ್ಚುವರಿ ಕೆಲಸಗಳನ್ನು ಶಿಕ್ಷಕರು ಕಡ್ಡಾಯವಾಗಿ ಮಾಡಲೇಬೇಕಿದೆ. ಇದೆಲ್ಲದರ ಜೊತೆಗೆ ಬಿಎಲ್‌ಒ ಕೆಲಸವನ್ನು ನೀಡಿರುವುದರಿಂದ ಪಠ್ಯ ಬೋಧನೆಗೆ ಸಮಯ ನೀಡಲು ಸಾಧ್ಯವಾಗುತ್ತಿಲ್ಲ. ಒಂದು ಬೂತ್‌ಗೆ ಒಬ್ಬ ಶಿಕ್ಷಕರನ್ನು ನಿಯೋಜಿಸಿರುವುದರಿಂದ ಕಳೆದ



ಒಂದೂವರೆ ತಿಂಗಳಿಂದ ಶಿಕ್ಷಕರು ತರಗತಿಗಳತ್ತ ಮುಖ ಮಾಡಿಲ್ಲ. ಬೆಳಿಗ್ಗೆಯಿಂದ ಸಂಜೆ ವರೆಗೆ ಮ್ಯಾಪಿಂಗ್ ಕಾರ್ಯದಲ್ಲೇ ಮುಳುಗಿದ್ದಾರೆ. ಅದರಿಂದ ವಿದ್ಯಾರ್ಥಿಗಳ ಕಲಿಕೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆಯೆಂಬ ಆರೋಪ ಕೇಳಿಬಂದಿದೆ.

### ಮ್ಯಾಪಿಂಗ್ ಕಾರ್ಯವಿಧಾನ ಹೇಗೆ

ಮತದಾರರ ವಿಶೇಷ ಪರಿಷ್ಕರಣೆಯಡಿ ಒಬ್ಬ ವ್ಯಕ್ತಿಗೆ ಎರಡೆರಡು ಕಡೆ ಮತದಾರರ ಗುರುತಿನ ಚೀಟಿ ಇದ್ದರೆ ಒಂದನ್ನು ಡಿಲೀಟ್ ಮಾಡಬೇಕು. 2002ರ ಮತದಾರರ ಗುರುತಿನ ಚೀಟಿ ಅನ್ವಯ 2025ಕ್ಕೆ ಅಪ್ಡೇಟ್ ಮಾಡಬೇಕು. ಕುಟುಂಬದ ವ್ಯಕ್ತಿ ಮರಣ ಹೊಂದಿದ್ದರೆ ಅಥವಾ ಸ್ಥಳಾಂತರವಾಗಿದ್ದರೆ ಅಂತವರ ಮಾಹಿತಿಯನ್ನು ಆ್ಯಪ್‌ನಲ್ಲಿ ಅಪ್ಲೋಡ್ ಮಾಡಬೇಕು. ಈ ಕಾರ್ಯಕ್ಕಾಗಿ ಸಾರ್ವಜನಿಕರು ತಮ್ಮ ಬೂತ್ ಕೇಂದ್ರಕ್ಕೆ ಬರಬೇಕೆಂಬ ನಿಯಮವಿದೆ. ಆದರೆ, ಸಾರ್ವಜನಿಕರು ಕಾರ್ಯಕ್ಕೆ ಆಸಕ್ತಿ ತೋರುತ್ತಿಲ್ಲ. ಹೀಗಾಗಿ ಮತದಾರರ ಪಟ್ಟಿಯೊಂದಿಗೆ ಮ್ಯಾಪಿಂಗ್ ಕಾರ್ಯಕ್ಕೆ ಕುಳಿತಿರುವ ಶಿಕ್ಷಕರು ಸಂಬಂಧಪಟ್ಟವರಿಗೆ ಕರೆ ಮಾಡಿ ಶಾಲೆಗೆ ಬರುವಂತೆ ಗೋಗರೆಯುತ್ತಿದ್ದಾರೆ. ಇಷ್ಟಾದರೂ ಕೆಲವರು ಬಾರದೆ ಇರುವುದರಿಂದ ಮನೆ ಮನೆಗೆ ತೆರಳಿ ಮಾಹಿತಿ ಕಲೆ ಹಾಕುವ ಸಂದಿಗ್ಧ ಪರಿಸ್ಥಿತಿ ನಿರ್ಮಾಣವಾಗಿದೆ.

### ಶಿಕ್ಷಕರಿಗೆ ನಿರಂತರ ನೋಟೀಸ್

ಪ್ರತಿ ಬಿಎಲ್‌ಒಗಳು ಶೇ. 90ರಷ್ಟು ಮ್ಯಾಪಿಂಗ್ ಕಾರ್ಯ ಮುಗಿಸಲೇಬೇಕೆಂಬ ಸೂಚನೆ ಹೊರಡಿಸಲಾಗಿದೆ. ಕೆಲವು ಕಡೆ ಇನ್ನು ಶೇ. 50ಕ್ಕಿಂತ ಕಡಿಮೆ ಸಾಧನೆಯಾಗಿದೆ. ಅಂತಹ ಶಿಕ್ಷಕರನ್ನು ಮೇಲಧಿಕಾರಿಗಳು ಗುರಿಯಾಗಿಸಿಕೊಂಡು ನಿತ್ಯವೂ ನೋಟೀಸ್ ಜಾರಿ ಮಾಡುತ್ತಿದ್ದಾರೆ. ಸೂಚನೆ ಪಾಲಿಸದಿದ್ದರೆ ದೂರು ದಾಖಲಿಸುವ ಎಚ್ಚರಿಕೆಯನ್ನು ಶಿಕ್ಷಕರಿಗೆ ನೀಡುತ್ತಿದ್ದಾರೆಂಬ ಆರೋಪಗಳು ಕೇಳಿಬಂದಿವೆ. ಹೀಗಾಗಿ ಶಿಕ್ಷಕರು ಮಾನಸಿಕವಾಗಿ ಕುಗ್ಗುವಂತಾಗಿದೆ.

ಬಿಎಲ್‌ಒಗಳಾಗಿ ನಿಯೋಜನೆಯಾಗುವ ಶಿಕ್ಷಕರಿಗೆ ಪ್ರತಿವರ್ಷ ಸರ್ಕಾರ 10 ಸಾವಿರ ರೂ. ಸಹಾಯಧನ ನೀಡುತ್ತದೆ. ಆದರೆ, ಮ್ಯಾಪಿಂಗ್ ಕಾರ್ಯಕ್ಕೆ ಯಾವುದೇ ಹಣ ನೀಡುವುದಿಲ್ಲ. ಆ್ಯಪ್ ಸಹ ಒಂದೊಂದು ಬಾರಿ ಕೈಕೊಡುತ್ತದೆ. ಇಷ್ಟೆಲ್ಲಾ ಕಷ್ಟಗಳ ನಡುವೆಯೂ ಜವಾಬ್ದಾರಿ ಎಂದು ಕೆಲಸ ಮಾಡುತ್ತಿದ್ದವೆಯಾದರೂ ನಿರಂತರ ನೋಟೀಸ್ ನೀಡಲಾಗುತ್ತಿದ್ದಾರೆ ಎಂದು ಶಿಕ್ಷಕರೊಬ್ಬರು ಅಳಲು ತೋಡಿಕೊಂಡರು.

### ಹೊರೆ ಕಡಿಮೆ ಮಾಡಲು ಆಗ್ರಹ

ಗ್ರಾಮೀಣ ಭಾಗದಲ್ಲಿ ಸಾರ್ವಜನಿಕರ ವಲಸೆ ಕಡಿಮೆ ಹಾಗು ಪತ್ತೆ ಹಚ್ಚುವಿಕೆ ಸುಲಭವಾಗಿರುವುದರಿಂದ ಬಿಎಲ್‌ಓಗಳಿಗೆ ಕಷ್ಟವಾಗುತ್ತಿಲ್ಲ. ಆದರೆ, ನಗರ ವ್ಯಾಪ್ತಿಯಲ್ಲಿ ಮ್ಯಾಪಿಂಗ್ ಕಷ್ಟ ಹೇಳತೀರದಾಗಿದೆ. ಉದ್ಯೋಗ, ವ್ಯಾಪಾರ ಮತ್ತಿತರ ಕಾರಣಗಳಿಂದ ಸ್ಥಳಾಂತರವಾದವರನ್ನು ಪತ್ತೆ ಮಾಡುವುದು ಸವಾಲಾಗಿದೆ. ಕೆಲವು ಬೂತ್‌ಗಳಲ್ಲಿ ಶೇ. 5 ರಿಂದ 10ರಷ್ಟು ಮಾತ್ರ ಸಾಧನೆಯಾಗಿದೆ. ಅಂತಹ ಶಿಕ್ಷಕರಿಗೆ ಮೇಲಾಧಿಕಾರಿಗಳು ನಿಂದಿಸುತ್ತಿದ್ದಾರೆ. ಮಾನಸಿಕವಾಗಿ ಹಿಂಸೆ ನೀಡುತ್ತಿರುವುದು ಖಂಡನೀಯವೆಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷೆ ಚೈತ್ರಾ ನಾಯಕರಹಳ್ಳಿ ಹೇಳಿದರು.

## ದೇವರಾಜೇಗೌಡ ವಿರುದ್ಧ ಅನ್ನಪೂರ್ಣ ಏಕವಚನದಲ್ಲಿ ವಾಗ್ದಾಳಿ





**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ದೇವರಾಜೇಗೌಡ ಮಾನಸಿಕ ಅಸ್ವಸ್ಥನಂತೆ ನನ್ನ ವಿರುದ್ಧ ಬಾಯಿಗೆ ಬಂದಂತೆ ಮಾತನಾಡುತ್ತಿದ್ದು, ಆತನ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಮಹಿಳಾ ಆಯೋಗಕ್ಕೆ ದೂರು ನೀಡುತ್ತೇನೆ ಎಂದು ಮಹಿಳಾ ಧ್ವನಿ ಸಂಘದ ರಾಜ್ಯಾಧ್ಯಕ್ಷೆ ಅನ್ನಪೂರ್ಣಗೌಡ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತನ್ನ ಕುಟುಂಬವನ್ನು ಸರಿಯಾಗಿ ನೋಡಿಕೊಳ್ಳದ ವ್ಯಕ್ತಿ ಬೇರೆ ಮಹಿಳೆಯರ ಬಗ್ಗೆ ಮಾತನಾಡುವ ನೈತಿಕತೆ ಉಳಿಸಿಕೊಂಡಿಲ್ಲ. ಇತ್ತೀಚೆಗೆ ನಡೆದ ಸುದ್ದಿಗೋಷ್ಠಿಯಲ್ಲಿ ನನ್ನ ವಿರುದ್ಧ ಆಡಿರುವ ಮಾತುಗಳಿಂದ ಮನಸ್ಸಿಗೆ ಆಘಾತವಾಗಿದೆ. ಪೆನ್‌ಡ್ರೈವ್ ಹಂಚಿ ಜಿಲ್ಲೆಯ ಮಹಿಳೆಯರ ಮಾನ ಹರಾಜು ಹಾಕಿದ ಅಯೋಗ್ಯನಿಂದ ನಾನು ಪಾಠ ಕಲಿಯಬೇಕಿಲ್ಲವೆಂದು ಏಕವಚನದಲ್ಲಿ ಅಪದ್ಧ ಮಾತುಗಳಿಂದ ತರಾಟೆಗೆ ತೆಗೆದುಕೊಂಡರು. ದೇವರಾಜೇಗೌಡ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಮುಖ್ಯಮಂತ್ರಿ, ಗೃಹ ಸಚಿವರಿಗೆ ಮನವಿ ಸಲ್ಲಿಸುತ್ತೇನೆ. ಎರಡು ದಿನಗಳಲ್ಲಿ ಮಹಿಳಾ ಆಯೋಗಕ್ಕೆ ದೂರು ನೀಡುತ್ತೇನೆ. ಜಿಲ್ಲಾಡಳಿತ ಕೂಡಲೇ ಆತನನ್ನು ಗಡಿಪಾರು ಮಾಡಬೇಕೆಂದು ಆಗ್ರಹಿಸಿದರು.

ಆತನಿಗೆ ನಾನು ಏನೆಂದು ತೋರಿಸುವೆ, ಜೈಲಿಗೆ ಹೋದರೂ ತೊಂದರೆ ಇಲ್ಲ ಆ ಮನುಷ್ಯನಿಗೆ ತಕ್ಕ ಶಾಸ್ತಿ ಖಚಿತ. ಈತ ಬೆರಕೆ ವ್ಯಕ್ತಿ, ಈತನನ್ನು ಬಿಜೆಪಿಯವರು ಯಾವ ಕಾರಣಕ್ಕೆ ಇಟ್ಟುಕೊಂಡಿದ್ದಾರೋ ಗೊತ್ತಿಲ್ಲ, ಕೂಡಲೇ ಆತನನ್ನು ಹೊರ ಹಾಕಬೇಕು, ಎಲ್ಲರ ಮೇಲೂ ಸುಳ್ಳು ಆರೋಪ ಮಾಡುವವನಿಗೆ ತಕ್ಕ ಬುದ್ಧಿ ಕಲಿಸುವೆ ಎಂದರು. ಸುದ್ದಿಗೋಷ್ಠಿಯಲ್ಲಿ ರತ್ನಮ್ಮ, ಶಶಿಕಲಾ, ರೇಣುಕಾ, ಮಾನವಿ ಇದ್ದರು.

# ಸಲೇಶಪುರದಲ್ಲಿ ರಸ್ತೆ ಅಗಲೀಕರಣಕ್ಕೆ ಚರ್ಚೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಸಕಲೇಶಪುರ ಪಟ್ಟಣದ ಬಿಎಂ ರಸ್ತೆ ಅಗಲೀಕರಣ ಹಾಗೂ ಸಂಚಾರ ದಟ್ಟಣೆ ನಿಯಂತ್ರಣ ಕುರಿತು ಶಾಸಕ ಸಿಮೆಂಟ್ ಮಂಜು ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳ ಸಭೆ ನಡೆಸಿದರು.

ಪಟ್ಟಣದ ಮೂಲಕ ಹಾದು ಹೋಗಿರುವ ಬಿಎಂ ರಸ್ತೆ ಕಿರಿದಾಗಿರುವುದರಿಂದ ವಾಹನ ದಟ್ಟಣೆ ಹೆಚ್ಚಾಗುತ್ತಿದ್ದು, ಸುಗಮ ಸಂಚಾರಕ್ಕೆ ಅಡೆತಡೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ರಸ್ತೆ ಅಗಲೀಕರಣದ ಅಗತ್ಯತೆ, ಯೋಜನೆಯ ವ್ಯಾಪ್ತಿ, ಅಗತ್ಯ ಭೂಸ್ವಾಧೀನ, ಕಾನೂನು ಅಡಚಣೆ ನಿವಾರಣೆ, ಪರಿಹಾರ ವಿತರಣೆ ಹಾಗೂ ಸಾರ್ವಜನಿಕರಿಗೆ ಆಗುವ ತೊಂದರೆಗಳನ್ನು ಕನಿಷ್ಠಗೊಳಿಸುವ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.





ರಸ್ತೆ ಅಗಲೀಕರಣದಿಂದ ಸಂಚಾರ ಸುಗಮವಾಗುವುದರ ಜೊತೆಗೆ ವ್ಯಾಪಾರ, ಪ್ರವಾಸೋದ್ಯಮ ಹಾಗೂ ಸಾರ್ವಜನಿಕ ಸುರಕ್ಷತೆಗೂ ಸಹಕಾರಿಯಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.

ಸಕಲೇಶಪುರ ಪಟ್ಟಣದಲ್ಲಿ ರಾಷ್ಟ್ರೀಯ ಹೆದ್ದಾರಿ ಸಂಪರ್ಕ ಹೊಂದಿರುವ ಬಿಎಂ ರಸ್ತೆ ಕಿರಿದಾಗಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದ್ದು, ಸಾರ್ವಜನಿಕರಿಂದ ನಿರಂತರವಾಗಿ ದೂರುಗಳು ಬರುತ್ತಿವೆ. ಈ ಹಿನ್ನೆಲೆಯಲ್ಲಿ ರಸ್ತೆ ಅಗಲೀಕರಣ ಅನಿವಾರ್ಯವಾಗಿದ್ದು, ಈ ದಿಕ್ಕಿನಲ್ಲಿ ಮತ್ತೆ ಚಟುವಟಿಕೆ ಆರಂಭವಾಗಿದೆ.

ಸುಮಾರು ಏಳು ವರ್ಷಗಳ ಹಿಂದೆ ಉಪವಿಭಾಗಾಧಿಕಾರಿಯಾಗಿದ್ದ ಲಕ್ಷ್ಮಿಕಾಂತ್ ರೆಡ್ಡಿ ಅವರ ಮುಂದಾಳತ್ವದಲ್ಲಿ ಬಿಎಂ ರಸ್ತೆ-ಸಕಲೇಶಪುರ ಸ್ವಾಮಿ ದೇವಸ್ಥಾನದಿಂದ ಬಿಎಂ ರಸ್ತೆಯಲ್ಲಿರುವ ಎಸ್‌ಬಿಐ ಬ್ಯಾಂಕ್‌ವರೆಗೆ ರಸ್ತೆ ಅಗಲೀಕರಣಕ್ಕೆ ಕ್ರಮ ಕೈಗೊಳ್ಳಲಾಗಿತ್ತು. ಆ ಸಂದರ್ಭದಲ್ಲಿ ಸರ್ಕಾರಿ ಜಾಗದಲ್ಲಿದ್ದ ಕೆಲವು ಕಟ್ಟಡಗಳನ್ನು ತೆರವುಗೊಳಿಸಲಾಗಿತ್ತು. ಆದರೆ ಕೆಲವು ಖಾಸಗಿ ಕಟ್ಟಡ ಮಾಲೀಕರು ಅಗಲೀಕರಣಕ್ಕೆ ವಿರೋಧ ವ್ಯಕ್ತಪಡಿಸಿ, ಕೆಲವರು ಹೈಕೋರ್ಟ್‌ನಿಂದ ತಡೆಯಾಜ್ಞೆ ತಂದಿದ್ದರಿಂದ ಯೋಜನೆ ಮಧ್ಯದಲ್ಲೇ ಸ್ಥಗಿತಗೊಂಡಿತ್ತು. ಆಗಿನ ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ ಅವರು ಅಗಲೀಕರಣಕ್ಕೆ ಸಂಪೂರ್ಣ ಬೆಂಬಲ ನೀಡಿದ್ದು, ಆಗಿನ ಸಚಿವ ಹೆಚ್.ಡಿ. ರೇವಣ್ಣ ಅವರು ಸಹ ಅಧಿಕಾರಿಗಳಿಗೆ ಬೆಂಬಲವಾಗಿ ನಿಂತಿದ್ದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಉಪವಿಭಾಗಾಧಿಕಾರಿ ಮಂಜುನಾಥ್, ಪುರಸಭಾ ಮುಖ್ಯ ಅಧಿಕಾರಿ ಮಹೇಶ್ವರಪ್ಪ ಹಾಗೂ ಇತರರಿದ್ದರು.

# ಜೂನ್ ಅಂತ್ಯಕ್ಕೆ ಕಟ್ಟೇಪುರ ಏತ ನೀರಾವರಿ ನೀರು



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**


ಅರಕಲಗೂಡು: ತಾಲ್ಲೂಕಿನ ಕಟ್ಟೇಪುರ ಏತ ನೀರಾವರಿ ಯೋಜನೆಯಡಿ ಜೂನ್ ಅಂತ್ಯದಲ್ಲಿ ಪ್ರಾಯೋಗಿಕವಾಗಿ ನೀರು ಹರಿಸಲಾಗುವುದು ಎಂದು ಶಾಸಕ ಎ. ಮಂಜು ಭರವಸೆ ನೀಡಿದರು. ಕಟ್ಟೆಪುರ ಏತ ನೀರಾವರಿ ಯೋಜನೆ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ್ದ ಅವರು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದರು.

18 ತಿಂಗಳಲ್ಲಿ ಪೂರ್ಣಗೊಳ್ಳಬೇಕಿದ್ದ ಕಾಮಗಾರಿ ಐದು ವರ್ಷ ಕಳೆದರೂ ಮುಗಿಯದಿರುವುದು ವಿಷಾದಕರ ಸಂಗತಿ. ಕಳೆದ ಕೆಲ ತಿಂಗಳಿನಿಂದ ನಿರಂತರವಾಗಿ ಸಭೆ ನಡೆಸಿದ ಪರಿಣಾಮ ಕಾಮಗಾರಿ ಅಂತಿಮ ಹಂತಕ್ಕೆ ತಲುಪಿದೆ. ಬಾಕಿ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಕಾಲಮಿತಿ ನೀಡಲಾಗಿದೆ ಎಂದರು.

123 ಕೋಟಿ ರೂ. ಅಂದಾಜು ವೆಚ್ಚದ ಮೊದಲ ಹಂತದ ಯೋಜನೆ ಅಂತಿಮ ಹಂತ ತಲುಪಿದೆ. 200 ಕೆರೆಗಳಿಗೆ 75 ದಿನಗಳ ಕಾಲ ನೀರು ಹರಿಸುವ ಕಾರ್ಯ ಕೈಗೊಳ್ಳಲಾಗುವುದು. 78 ಕಿ.ಮೀ. ರೈಸಿಂಗ್ ಮೇನ್ ಅಳವಡಿಕೆ ಕಾರ್ಯದಲ್ಲಿ 50 ಕಿ.ಮೀ. ಕಾಮಗಾರಿ ಪೂರ್ಣಗೊಂಡಿದೆ. 1300 ಅಶ್ವಶಕ್ತಿ ಸಾಮರ್ಥ್ಯದ ನೀರೆತ್ತಲು 4 ಯಂತ್ರ ಅಳವಡಿಸಲಾಗಿದೆ. 0.387 ಟಿಎಂಸಿ ನೀರು ಬಳಕೆ ಮಾಡುವ ಗುರಿ ಹೊಂದಲಾಗಿದೆ. ಜಾಕ್‌ವೆಲ್ ಕಾಮಗಾರಿ ಪೂರ್ಣಗೊಳಿಸಲು ಮಾ. 31ರಂದು, ರೈಸಿಂಗ್ ಮೇನ್ ಉಳಿಕೆ ಕಾಮಗಾರಿಗೆ ಏ.30, ಗುರುತ್ವಾಕರ್ಷಣೆ ಮೇನ್ ಮೇ 30, ವಿದ್ಯುತ್ ಉಪಕೇಂದ್ರ ಮತ್ತು ಇತರ ಕಾಮಗಾರಿಗಳನ್ನು ಜೂ. 30ರ ಒಳಗೆ ಪೂರ್ಣಗೊಳಿಸಿ ಪ್ರಾಯೋಗಿಕ ನೀರು ಹರಿಸುವ ಕಾರ್ಯ ನಡೆಸುವಂತೆ ಗಡುವು ನೀಡಲಾಗಿದೆ. ಮೊದಲ ಹಂತದ ಕಾಮಗಾರಿ ಚಾಲನೆಗೆ ಬಂದ ಬಳಿಕ 77 ಕೋಟಿ ರೂ. ವೆಚ್ಚದ ಎರಡನೇ ಹಂತದ ಕಾಮಗಾರಿ ಕೈಗೆತ್ತಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಹಾರಂಗಿ ಯೋಜನಾ ವೃತ್ತದ ಅಧೀಕ್ಷಕ ಇಂಜಿನಿಯರ್ ಸತೀಶ್, ಸೋಮವಾರಪೇಟೆ ತಹಶೀಲ್ದಾರ್ ಕೃಷ್ಣಮೂರ್ತಿ, ಇಇ ಪುಟ್ಟಸ್ವಾಮಿ, ಎಇಇ ದೀಪಕ್ ಮತ್ತು ಗ್ರಾಮಸ್ಥರು ಹಾಜರಿದ್ದರು.

## ಸರಳತೆ ಮನುಷ್ಯನ ಸೌಂದರ್ಯ ಹೆಚ್ಚಿಸುತ್ತದೆ : ಮಾಸ್ತಿ



ಮಾಸ್ತಿ ವೆಂಕಟೇಶ ಅಯ್ಯಂಗಾರ್

ಈ ಮಾತು ಮಾನವನ ಜೀವನದಲ್ಲಿ ಸರಳತೆ ಮತ್ತು ವಿನಯದ ಮಹತ್ವವನ್ನು ತಿಳಿಸುತ್ತದೆ. ಹೊರಗಿನ ಆಭರಣಗಳು ಅಥವಾ ಐಶ್ವರ್ಯವಲ್ಲ, ವ್ಯಕ್ತಿಯ ಒಳಗಿನ ಗುಣಗಳು, ನಡೆ-ನುಡಿಗಳು ಮತ್ತು ಸ್ವಭಾವವೇ ಅವನ ನಿಜವಾದ ಸೌಂದರ್ಯ ಎಂದು ಇದು ಸಾರುತ್ತದೆ. ಸರಳವಾಗಿ ಬದುಕುವವನು ಅಹಂಕಾರದಿಂದ ದೂರವಿದ್ದು, ಇತರರ ಮನಸ್ಸಿನಲ್ಲಿ ಗೌರವವನ್ನು ಗಳಿಸುತ್ತಾನೆ. ಸಮಾಜದಲ್ಲಿ ಒಳ್ಳೆಯ ಸಂಬಂಧಗಳನ್ನು ಬೆಳೆಸಲು ಸರಳತೆ ದೊಡ್ಡ ಪಾತ್ರ ವಹಿಸುತ್ತದೆ. ವಿದ್ಯಾರ್ಥಿಗಳಿಗೂ ಇದು ಮಹತ್ವದ ಪಾಠ ಅತಿಯಾದ ಪ್ರದರ್ಶನಕ್ಕಿಂತ ಸರಳತೆ, ಶಿಸ್ತು ಮತ್ತು ಪ್ರಾಮಾಣಿಕತೆ ಜೀವನವನ್ನು ಉನ್ನತಿಗೇರಿಸುತ್ತದೆ. ನಿಜವಾದ ಮಹತ್ವವು ಬಾಹ್ಯ ರೂಪದಲ್ಲಿ ಅಲ್ಲ, ವಿನಯ, ಸೌಜನ್ಯ ಮತ್ತು ಸರಳ ಮನಸ್ಸಿನಲ್ಲಿ ಅಡಗಿದೆ ಎಂಬುದನ್ನು ಈ ಮಾತು ಸ್ಪಷ್ಟವಾಗಿ ತಿಳಿಸುತ್ತದೆ.

**– ಅಂತೋಣಿ ಮುತ್ತು ವಿ ಶಿಕ್ಷಕರು 7259675543**

## ಫೆ. 25 ರಂದು ಕಾರ್ಯಾಗಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಟೆಕ್ಸಾಕ್ ಬೆಂಗಳೂರು ಸಂಯುಕ್ತಾಶ್ರದಲ್ಲಿ ರ್‍ಯಾಂಪ್ ಯೋಜನೆಯಡಿ ಫೆ. 25ರ ಬೆಳಿಗ್ಗೆ 10 ಗಂಟೆಗೆ ರಾಜೀವ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಇಂಜಿನಿಯರಿಂಗ್ ಕಾಲೇಜು) ಒಂದು ದಿನದ ಇನ್ಕ್ಯುಬೇಷನ್ ಜಾಗೃತಿ ಕಾರ್ಯಾಗಾರ ಆಯೋಜಿಸಲಾಗಿದೆ. ಉದ್ದಿಮೆದಾರರು ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕೆಂದು ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ದೂರವಾಣಿ ಸಂಖ್ಯೆ-08172-296217, 240606 ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಭ್ರಷ್ಟಾಚಾರ ನಿಯಂತ್ರಣ ಕುರಿತು ಜಾಗೃತಿ ಮೂಡಿಸಿ: ಕೆ. ಶಿಲ್ಪಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಆಲೂರು: ತಾಲೂಕು ಮಟ್ಟದಲ್ಲಿ ಭ್ರಷ್ಟಚಾರ ನಿಯಂತ್ರಣ ಕುರಿತು ಜಾಗೃತಿ ಮೂಡಿಸಬೇಕು ಎಂದು ಹಾಸನ ಲೋಕಾಯುಕ್ತ ಪೊಲೀಸ್ ನಿರೀಕ್ಷಕಿ ಕೆ. ಶಿಲ್ಪಾ ಅಧಿಕಾರಿಗಳಿಗೆ ತಿಳಿಸಿದರು.

ಪಟ್ಟಣದ ಮಿನಿ ವಿಧಾನಸೌಧ ಕಚೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಘಟಕದ ವತಿಯಿಂದ ಏರ್ಪಡಿಸಿದ್ದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಿ ಮಾತನಾಡಿದರು.

ಸಭೆಯಲ್ಲಿ 17 ದೂರುಗಳು ಸಲ್ಲಿಕೆಯಾಗಿದ್ದು ಈ ಪೈಕಿ ಎರಡು ದೂರುಗಳನ್ನು ತಹಶೀಲ್ದಾರ್ ಮತ್ತು ಎ.ಡಿ.ಎಲ್.ಆರ್.ಗೆ ಸ್ಥಳದಲ್ಲೆ ಇತ್ಯರ್ಥ ಪಡಿಸಲು ಸೂಚನೆ ನೀಡಲಾಗಿದೆ. ಇನ್ನೂ ಉಳಿದ ದೂರಗಳಿಗೆ ಕಾಲಮಿತಿಯಲ್ಲಿ ಪರಿಶೀಲನೆ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಧಿಕಾರಿಗಳು ಸಾರ್ವಜನಿಕರ ಸೇವೆಗಾಗಿ ಇರುವುದು.



ಸಾರ್ವಜನಿಕರನ್ನು ಸತಾಯಿಸುವ ಕಾರ್ಯ ಮಾಡಬಾರದು. ಇತ್ತೀಚೀನ ದಿನಗಳಲ್ಲಿ ಕಂದಾಯ ಇಲಾಖೆಯ ವಿರುದ್ಧ ಅನೇಕ ದೂರುಗಳು ಬುರುತ್ತಿವೆ. ಪೌತಿ ಖಾತೆ ಬದಲಾಣೆಗೆ ಲಂಚ ನೀಡುವ ಸ್ಥಿತಿ ಇದ್ದು, ಇದರ ವಿರುದ್ಧ ದೂರು ನೀಡಲು ಹಿಂದೇಟು ಹಾಕುತ್ತಿರುವುದು ವಿಪರ್ಯಾಸವಾಗಿದೆ. ಲೋಕಾಯುಕ್ತದ ಬಗ್ಗೆ ಜನಸಾಮಾನ್ಯರು ತಿಳಿದುಕೊಂಡು ಭ್ರಷ್ಟಚಾರದ ಪರಿಸ್ಥಿತಿ ಎದುರಾದ ಸಂದರ್ಭದಲ್ಲಿ ಇಲಾಖೆಗೆ ಮಾಹಿತಿ ನೀಡಬೇಕು ಎಂದರು.

ಕಂದಾಯ ಇಲಾಖೆ, ತಾಲೂಕು ಪಂಚಾಯಿತ್ ಕಾರ್ಯಾಲಯ, ಪಟ್ಟಣ ಪಂಚಾಯಿತಿ ಕಾರ್ಯಾಲಯ, ಅರಣ್ಯ ಇಲಾಖೆ, ಭೂದಾಖಲೆಗಳ ಸಹಾಯಕ ನಿರ್ದೇಶಕ ಇಲಾಖೆ ಸೇರಿದಂತೆ 17 ಅರ್ಜಿಗಳು ಸಲ್ಲಿಕೆಯಾದವು. ಜಮೀನು ಖಾತೆ, ಪ್ಲಾಂಟಿಗ್ ಕುರಿತು ಹೆಚ್ಚಿನ ಅಹವಾಲುಗಳನ್ನು ಸ್ಥಳದಲ್ಲೆ ಅಧಿಕಾರಿಗಳು ಇತ್ಯರ್ಥ ಮಾಡಿದರು.

ಸಭೆಯಲ್ಲಿ ತಹಸೀಲ್ದಾರ್ ಮಲ್ಲಿಕಾರ್ಜುನ್, ತಾಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುಬ್ರಹ್ಮಣ್ಯ ಶರ್ಮ, ಭೂದಾಖಲೆಗಳ ಸಹಾಯಕ ನಿರ್ದೇಶಕ ರವಿಶಂಕರ್, ಲೊಕಾಯುಕ್ತ ಇಲಾಖೆ ಸಿಬ್ಬಂದಿ ಉಮೇಶ್, ಸುರೇಶ್ ಇತರರಿದ್ದರು.

## ಇತಿಹಾಸದಲ್ಲಿ ಈ ದಿನ

### ಫೆಬ್ರವರಿ-13

**1542:** ಇಂಗ್ಲೆಂಡ್‌ನ ರಾಣಿ ಕ್ಯಾಥರಿನ್ ಹಾವರ್ಡ್ ಅವರನ್ನು ದೇಶದ್ರೋಹ ಆರೋಪದಲ್ಲಿ ಗಲ್ಲಿಗೇರಿಸಲಾಯಿತು.

**1913:** ಟಿಬೆಟ್ ತನ್ನನ್ನು ಚೀನಾದಿಂದ ಸ್ವತಂತ್ರ ರಾಷ್ಟ್ರ ಎಂದು ಘೋಷಿಸಿತು.

**1945:** ದ್ವಿತೀಯ ಮಹಾಯುದ್ಧದ ವೇಳೆ ಡ್ರೆಸ್ಡನ್ (ಜರ್ಮನಿ) ಮೇಲೆ ಭಾರೀ ವಾಯುದಾಳಿ ನಡೆಯಿತು.

**ಜನನ**

**1879:** ಸರೋಜಿನಿ ನಾಯ್ಡು, ಭಾರತದ ಸ್ವಾತಂತ್ರ್ಯ ಹೋರಾಟಗಾರ್ತಿ ಮತ್ತು ಕವಯಿತ್ರಿ

**1911:** ವಿನೋಬಾ ಭಾವೆ, ಭಾರತೀಯ ಸಮಾಜ ಸುಧಾರಕ ಮತ್ತು ಭೂದಾನ ಚಳವಳಿಯ ನಾಯಕ

**ಮರಣ**

**1974:** ವಿಜಯಲಕ್ಷ್ಮಿ ಪಂಡಿತ್, ಭಾರತೀಯ ರಾಜತಾಂತ್ರಿಕ ಹಾಗೂ ರಾಜಕಾರಣಿ

## ಫೆ.15ರಂದು ಸಂತ ಸೇವಾಲಾಲ್ ಜಯಂತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಫೆ.15 ರಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಬೆಳಿಗ್ಗೆ 11 ಗಂಟೆಗೆ ಸಂತ ಸೇವಾಲಾಲ್ ಜಯಂತಿ ಆಯೋಜಿಸಲಾಗಿದೆ.

ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ಶ್ರೇಯಸ್ ಪಟೇಲ್ ಉಪಸ್ಥಿತಿ ವಹಿಸುವರು. ಜಿಲ್ಲಾ ಬಂಜಾರ ಸಂಘದ ಉಪಾಧ್ಯಕ್ಷ ಧರ್ಮಪ್ಪ ಉಪನ್ಯಾಸ ನೀಡಲಿದ್ದಾರೆ.

## ಇಂದು ರಾಷ್ಟ್ರೀಯ ಮಹಿಳಾ ದಿನ



ಫೆಬ್ರವರಿ 13ರಂದು ರಾಷ್ಟ್ರೀಯ ಮಹಿಳಾ ದಿನವನ್ನು ಸರೋಜಿನಿ ನಾಯ್ಡು ಅವರ ಜನ್ಮ ದಿನದ ಅಂಗವಾಗಿ ಆಚರಿಸಲಾಗುತ್ತದೆ. ಮಹಿಳೆಯರ ಸಾಮರ್ಥ್ಯ, ಧೈರ್ಯ, ನಾಯಕತ್ವ ಮತ್ತು ಸಬಲೀಕರಣವನ್ನು ಸ್ಮರಿಸುವ ಮಹತ್ವದ ದಿನ ಇದು. ರಾಜಕೀಯದಲ್ಲಿ ಇಂದಿರಾ ಗಾಂಧಿ, ದ್ರೌಪದಿ ಮುರ್ಮು, ಜಯಲಲಿತಾ, ಸಮಾಜ ಸೇವೆಯಲ್ಲಿ ಮದರ್ ತೆರೆಸಾ, ಸುಧಾಮೂರ್ತಿ, ವಿಜ್ಞಾನದಲ್ಲಿ ಕಲ್ಪನಾ ಚಾವ್ಲಾ, ಟೆಸಿ ಥಾಮಸ್, ಗಗನದೀಪ್ ಕಂಗ್, ಕ್ರೀಡೆಯಲ್ಲಿ ಪಿ.ಟಿ.ಉಷಾ, ಸ್ಮೃತಿ ಮಂದಾನಾ, ಪಿ.ವಿ. ಸಿಂಧು, ಮೇರಿ ಕೋಮ್, ಸಾಕ್ಷಿ ಮಲಿಕ್, ಉದ್ಯಮದಲ್ಲಿ ಕಿರಣ್ ಮಜುಂದಾರ್, ಫಾಲ್ಗುನಿ ನಾಯರ್, ಆಡಳಿತದಲ್ಲಿ ಕಿರಣ್ ಬೇಡಿ, ಸಾಹಿತ್ಯದಲ್ಲಿ ಸರೋಜಿನಿ ನಾಯ್ಡು, ವೈದೇಹಿ, ತ್ರಿವೇಣಿ, ಸಾರಾ ಅಬೂಬಕರ್, ಹಾಸನದ ಬಾನು ಮುಷ್ತಾಕ್, ಸಂಗೀತದಲ್ಲಿ ಎಂ.ಎಸ್. ಸುಬ್ಬುಲಕ್ಷ್ಮಿ, ಲತಾ ಮಂಗೇಶ್ಕರ್ ಮುಂತಾದವರು ದೇಶದ ಹೆಮ್ಮೆ. ಗ್ರಾಮೀಣ ಮಹಿಳೆಯರಿಂದ ಜಾಗತಿಕ ನಾಯಕಿಯವರವರೆಗೆ ಎಲ್ಲರೂ ತಮ್ಮ ಪ್ರತಿಭೆಯಿಂದ ಸಮಾಜವನ್ನು ರೂಪಿಸುತ್ತಿದ್ದಾರೆ. ಮಹಿಳೆಯರು ಕುಟುಂಬದ ಬೆನ್ನೆಲುಬು ಮಾತ್ರವಲ್ಲ, ರಾಷ್ಟ್ರದ ಪ್ರಗತಿಯ ಶಕ್ತಿಯೂ ಆಗಿದ್ದಾರೆ. ಈ ದಿನ ಮಹಿಳಾ ಸಬಲೀಕರಣ, ಸಮಾನತೆ, ಶಿಕ್ಷಣ ಮತ್ತು ಗೌರವವನ್ನು ಉತ್ತೇಜಿಸುವ ಸಂಕಲ್ಪದ ದಿನವಾಗಿರಲಿ. ಸರೋಜಿನಿ ನಾಯ್ಡು ಅವರ ಧೈರ್ಯ, ಸೇವಾ ಮನೋಭಾವ ಮತ್ತು ದೇಶಭಕ್ತಿ ನಮ್ಮೆಲ್ಲರಿಗೂ ಸ್ಫೂರ್ತಿಯಾಗಲಿ, ಮಹಿಳೆಯರ ಸಾಧನೆಗಳನ್ನು ಗೌರವಿಸಿ ಅವರ ಕನಸುಗಳಿಗೆ ಬೆಂಬಲ ನೀಡುವುದು ನಮ್ಮ ಕರ್ತವ್ಯ.

**-ಅಂತೋಣಿ ಮುತ್ತು ವಿ**
**ಶಿಕ್ಷಕರು, 7259675543**

## ಇಂದು ಅಲ್ಲಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಕಂದಲಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಹಮ್ಮಿಕೊಂಡಿರುವುದರಿಂದ ಫೆ.13ರ ಶುಕ್ರವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6ರ ವರೆಗೆ ಆಲೂರು ಟೌನ್, ಗುಡ್ಡೇನಹಳ್ಳಿ, ಹುಣಸೆವಳ್ಳಿ, ಬೈರಾಪುರ, ಕಂದಲಿ, ಶೆಟ್ಟಿಹಳ್ಳಿ, ಶಂಕರನಹಳ್ಳಿ, ಅಗಲಹಳ್ಳಿ, ಕಣತೂರು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248